# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 53 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 09–09–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 53 | RNI No: KARKAN/2023/88462 | Chitradurga | Date: 09-09-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಹಿರಿಯರ ಅನುಭವ, ಶಕ್ತಿ, ಸಾಮರ್ಥ್ಯಗಳ ಸದ್ಬಳಕೆ ಸಮಾಜ ಪಡೆಯಲಿ: ಕರೆಣ್ಣವರ್ 2

ಡಿಕೆಶಿ ಕ್ಷೇತ್ರ ಎಂದ ತಕ್ಷಣ ಅಮಿತ್ ಶಾ ಅಧಿಕಾರಿಗಳು ಬರುವುದನ್ನೇ ಬಿಟ್ಟರು 3

ಬಾರು ಮತ್ತು ಗ್ರಂಥಾಲಯ, ನಮ್ಮ ಆಯ್ಕೆ........ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಸಿದ್ದರಾಮಯ್ಯ ಸಿಎಂ ಆಗಿ ಮುಂದುವರೆಯುತ್ತಾರೆ: ಸಚಿವ ಸುಧಾಕರ್

» ಚಿತ್ರದುರ್ಗ



ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ ಎಂದು ಸಚಿವ ಡಿ ಸುಧಾಕರ್ ಹೇಳಿದ್ದಾರೆ. ಚಿತ್ರದುರ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮುಡಾ ಹಗರಣ, ಸಿಎಂ ತಲೆದಂಡಕ್ಕೆ ಪ್ರತಿಪಕ್ಷಗಳು ಆಗ್ರಹಿಸುತ್ತಿದ್ದು ತಮಾಷೆಗೆ ಕೆಲವರು ಹಾಗೆ ಹೇಳಿರಬಹುದು ಎಂದು ಕೊಡ್ಡಿದ್ದೇನೆ. ಸಿಎಂ ಆಗೋ ಯೋಗ್ಯತೆ ಎಲ್ಲರಿಗೂ ಇರಬಹುದು ಆದರೆ ಅದನ್ನ ಹೈಕಮಾಂಡ್ ತೀರ್ಮಾನ ಮಾಡಬೇಕಿದೆ. ಸಿದ್ದರಾಮಯ್ಯ ಅವರೇ ಸಿಎಂ ಆಗಿ ಮುಂದುವರೆಯುತ್ತಾರೆ. ಅದರಲ್ಲಿ ಅನುಮಾನ ಇಲ್ಲ ಸಧ್ಯ ಮುಖ್ಯಮಂತ್ರಿ ಸೀಟ್ ಖಾಲಿ ಇದೆಯಾ ಎಂದು ಪ್ರಶ್ನೆ ಮಾಡಿದ ಸುಧಾಕರ್ ಅವರು ನಮಗೆ ನ್ಯಾಯಾಲಯದಲ್ಲಿ ನಂಬಿಕೆ ಇದ್ದು ಸಿ ಎಂ ಆಗಿ ಸಿದ್ಧರಾಮಯ್ಯನವರೇ ಮುಂದುವರಿಯುತ್ತಾರೆ ಎಂದು ಡಿ ಸುಧಾಕರ್ ಹೇಳಿದ್ದಾರೆ

### ಸಚಿವ ಸತೀಶ್ ಜಾರಕಿಹೊಳಿಗಿಂತ ನಾನು ಸಿನೀಯರ್: ಎಂಬಿಪಿ

» ವಿಜಯಪುರ



ರಾಜ್ಯದಲ್ಲಿ ಸಿದ್ದರಾಮಯ್ಯ ಸಿಎಂ ಆಗಿದ್ದಾರೆ, ಸಿಎಂ ಆಗಿಯೇ ಮುಂದುವರೆಯುತ್ತಾರೆ ಎಂದು ಸಚಿವ ಎಂಬಿ ಪಾಟೀಲ್ ಹೇಳಿದ್ದಾರೆ. ವಿಜಯಪುರ ಜಿಲ್ಲೆ ಬಬಲೇಶ್ವರ ತಾಲೂಕಿನ ಮಮದಾಪೂರ ಗ್ರಾಮದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಸಚಿವ ಎಂ ಬಿ ಪಾಟೀಲ್, ಮುಡಾ ಹಗರಣದಲ್ಲಿ ಸಿದ್ದರಾಮಯ್ಯನವರ ಪಾತ್ರದ ಕುರಿತು ಯಾವುದೇ ಹುರಳಿಲ್ಲ, ಪಾತ್ರವಿಲ್ಲ. ಮುಡಾ ಹಗರಣದಲ್ಲಿ ಸಿದ್ದರಾಮಯ್ಯನವರಿಗೆ ಹಾಗಾಗುತ್ತೆ ಹೀಗಾಗುತ್ತೆ ಎಂದು ಯಾರಾದ್ರೂ ತಿಳಿದುಕೊಂಡಿದ್ದರೆ ಅದು ಆಗಲ್ಲ ಎಂದು ಹೇಳಿದರು. ಕಾಂಗ್ರೆಸ್‌ನ ಕೆಲ ನಾಯಕರು ದೆಹಲಿಗೆ ಹೋಗಿರುವ ವಿಚಾರದ ಬಗ್ಗೆ ಮಾತನಾಡಿದ ಎಂಬಿ ಪಾಟೀಲ್, ದೆಹಲಿಗೆ ಹೋಗಬಾರದು ಅಂತೇ ಏನಾದ್ರು ಇದೆಯಾ? ನಾನು ದೆಹಲಿಗೆ ಹೋಗುತ್ತಿದ್ದೇನೆ. ಕೇಂದ್ರ ಸಚಿವರನ್ನ ಭೇಟಿಯಾಗಲು ದೆಹಲಿಗೆ ಹೋಗುತ್ತಿದ್ದೇನೆ. ದೆಹಲಿಗೆ ಹೋಗುವುದರಲ್ಲಿ ತಪ್ಪಿಲ್ಲ, ವರಿಷ್ಠರನ್ನ ಭೇಟಿಯಾಗುತ್ತಿರುತ್ತಾರೆ ಎಂದರು. ಸತೀಶ್ ಜಾರಕಿಹೊಳಿ ಸಿಎಂ ಆಗಲು ಲಕ್ಷಣ ಸವದಿ ಬೆಂಬಲ ನೀಡಿದ ವಿಚಾರದ ಬಗ್ಗೆ ಮಾತನಾಡಿದ ಎಂಬಿ ಪಾಟೀಲ್, ಸತೀಶ್ ಜಾರಕಿಹೊಳಿ ಇರಲಿ, ಎಂ ಬಿ ಪಾಟೀಲ್ ಇರಲಿ, ಯಾರೇ ಇರಲಿ. ಸದ್ಯ ಸಿಎಂ ಕುರ್ಚಿ ಖಾಲಿ ಇಲ್ಲ ಎಂದರು.

### ಗಣಪತಿ ಪ್ರತಿಷ್ಠಾಪನೆ ವೇಳೆ ಗಲಾಟೆ

» ಶಿವಮೊಗ್ಗ

ಗಣಪತಿ ಪ್ರತಿಷ್ಠಾಪನೆ ವೇಳೆ ಎರಡು ಗುಂಪುಗಳ ನಡುವೆ ಮಾರಾಮಾರಿ ನಡೆದ ಘಟನೆ ಶಿವಮೊಗ್ಗದಲ್ಲಿ ಶನಿವಾರ ನಡೆದಿದೆ. ಭದ್ರಾವತಿ ತಾಲೂಕಿನ ಹೊಳೆಹೊನ್ನೂರು ಸಮೀಪದ ಅರಬಿಳಚಿ ಕ್ಯಾಂಪ್‌ನಲ್ಲಿ ಗಣಪತಿ ಪ್ರತಿಷ್ಠಾಪನೆ ವೇಳೆ ಎರಡು ಗುಂಪುಗಳ ಮಧ್ಯೆ ಗಲಾಟೆಯಾಗಿದ್ದು, ಪರಿಣಾಮ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ಸೃಷ್ಟಿಯಾಗಿತ್ತು. ಗಲಾಟೆ ವೇಳೆ ಅರ್ಜುನ್ ಎಂಬ ಯುವಕನ ಮೇಲೆ ಹಲ್ಲೆ ಮಾಡಲಾಗಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ಬಿಡಿಸಲು ಹೋದ ಪೋಲಿಸ್ ಪೇದೆಗಳಾದ ನಾಗರಾಜ್ ಮತ್ತು ವಿಶ್ವ ಎಂಬುವರ ಮೇಲೆ ಕಲ್ಲು ತೂರಾಟ ನಡೆಸಲಾಗಿದೆ ಎಂದು ವರದಿಗಳಿಂದ ತಿಳಿದುಬಂದಿದೆ.ಗಲಾಟೆ ಬಳಿಕ ಸ್ಥಳಕ್ಕೆ ಎಎಸ್‌ಪಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸುಮಾರು 15 ರಿಂದ 20 ಜನರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆಂದು ವರದಿಗಳು ತಿಳಿಸಿವೆ.ಗಣೇಶ ಮೂರ್ತಿ ತರುವಾಗ ಡೊಳ್ಳು ಬಾರಿಸುವವರ ವಿಚಾರದಲ್ಲಿ 2 ಗುಂಪುಗಳ ಮಧ್ಯ ಘರ್ಷಣೆ ನಡೆದಿದೆ ಎಂದು ಹೇಳಲಾಗುತ್ತಿದ್ದು, ಕೆಲಕಾಲ ಬಿಗುವಿನ ವಾತಾವರಣ ನಿರ್ಮಾಣವಾಗಿದೆ.ಘಟನೆ ಬೆನ್ನಲ್ಲೇ ಸ್ಥಳದಲ್ಲಿ ಕೆಎಸ್‌ಆರ್‌ಪಿ ತುಕಡಿ ನಿಯೋಜನೆ ಮಾಡಲಾಗಿದೆ.

# ನಿಜವಾದ ಆರೋಗ್ಯವಂತರೆಂದರೆ ಪತ್ರಿಕಾ ವಿತರಕರು: ಪಂಡಿತರಾಧ್ಯ ಶ್ರೀ

» ಚಿತ್ರದುರ್ಗ





ಜ್ಞಾನವನ್ನು ಕೊಡುವಂತಹ ಕೆಲಸವನ್ನು ಮೀಡಿಯಾಗಳುಮಾಡುತ್ತವೆ..ಸಮಾಜದಲ್ಲಿ ದೊಡ್ಡವರು ಕಾಣಿಸಿಕೊಳ್ಳುತ್ತಾರೆ ಆದರೆ ಅವರ ಹಿಂದೆ ಕೆಲಸ ಮಾಡುವವರು ಕಾಣಿಸಿಕೊಳ್ಳುವುದಿಲ್ಲ. ಸಮಾಜದಲ್ಲಿ ಯಾವುದೇ ಕೆಲಸ ಕನಿಷ್ಠ ಅಲ್ಲ.. ಗರಿಷ್ಠ ಅಲ್ಲ ಮಾಡುವ ಕೆಲಸವನ್ನು ಶ್ರದ್ಧೆಯಿಂದ ಮಾಡಬೇಕು.. ನಿಜವಾದ ಆರೋಗ್ಯವಂತರೆಂದರೆ ವಿತರಕರು. ಏಕೆಂದರೆ ಅವರು ಬೆಳಗ್ಗೆ ಬೇಗ ಏಳುತ್ತಾರೆ... ಸೈಕಲ್ ತುಳಿಯುತ್ತಾರೆ. ಎಂದು ಶ್ರೀ ಸಾಣೇಹಳ್ಳಿ ಗುರುಪೀಠದ ಶ್ರೀ ಪಂಡಿತರಾಧ್ಯ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ ಹಾಗೂ ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಿಕಾ ಹಂಚಿಕೆದಾರರ, ವಿತರಕರ ಸಂಘದ ವತಿಯಿಂದ ನಗರದ ಮುರುಘಾಮಠದ ಅನುಭವ ಮಂಟಪದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ವಿತರಕರ 4ನೇ ರಾಜ್ಯಮಟ್ಟದ ಸಮ್ಮೇಳನದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಭಗವಂತನು ಒಲಿದರೆ ಎಲ್ಲವೂ ಸಾಧ್ಯ. ಭಗವಂತ ಒಲಿದರೆ ಗೊಡ್ಡ ಹಸು ಸಹ ಹಾಲು ಕರಿಯುತ್ತೆ..ಅರಿವನ್ನು ಆಸ್ತಿಯನ್ನಾಗಿ ಮಾಡಿಕೊಂಡರೆ ಏನು ಬೇಕಾದರೂ ಮಾಡಲು ಸಾಧ್ಯ.ವಿತರಕರಿಗೆ ಮುಖ್ಯವಾಗಿ ಬೇಕಾಗಿರುವುದು ಒಂದು ವಾಹನ, ಒಂದು ನಿವೇಶನ ಹಾಗೂ ಅವರ ಮಕ್ಕಳಿಗೆ ಶಿಕ್ಷಣ.. ಇವುಗಳನ್ನು ಒದಗಿಸಲು ಕ್ರಮವಹಿಸಿದರೆ ವಿತರಕರು ನೆಮ್ಮದಿಯಿಂದ ಬದುಕುತ್ತಾರೆ. ಕಾಯಕ ಶ್ರದ್ದೆ ಯಾರಲ್ಲಿ ಇರುತ್ತೋ ಅವರು ಯಾವತ್ತೂ ಸೋಲಲ್ಲ ಅದಕ್ಕೆ ಉದಾಹರಣೆ ವಿಜಯ ಸಂಕೇಶ್ವರವರು ಎಂದರು.ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಂಸದ ಗೋವಿಂದ ಕಾರಜೋಳ ಜನತಂತ್ರ ವ್ಯವಸ್ಥೆಯಲ್ಲಿ ನಿಜವಾದ ಪ್ರಮುಖ ಪಾತ್ರ ವಹಿಸುವವರು ಮುದ್ರಣ ಮಾಧ್ಯಮದವರು. ಹಾಲು ಹಾಕುವವರ, ಪೋಸ್ಟ್‌ಮ್ಯಾನ್‌ಗಳ ಸೇವೆಗಿಂತ ತ್ವರಿತವಾಗಿ ಪತ್ರಿಕಾ ವಿತರಕರು ಕೆಲಸ ಮಾಡುತ್ತಿದ್ದಾರೆ.ಪೋಸ್ಟ್ ಮ್ಯಾನ್‌ಗಳಿಗೆ ಹಲವು ಸವಲತ್ತುಗಳಿರುತ್ತವೆ ಯಾವುದೇ ಸವಲತ್ತುಗಳಿಲ್ಲದೆ ತ್ವರಿತವಾಗಿ ಸೇವೆಯನ್ನು ವಿತರಕರು ಮಾಡುತ್ತಾರೆ. ಈ ರಾಷ್ಟ್ರದ ರಾಷ್ಟ್ರಪತಿಗಳಾಗಿದ್ದ ಕಲಾಂ ರವರು ವಿತರಕರಾಗಿ ಕೆಲಸ ಮಾಡಿದ್ದಾರೆ... ಅಷ್ಟೇ ಅಲ್ಲದೆ ರಾಷ್ಟ್ರದಲ್ಲಿ ಎಷ್ಟೋ ವಿದ್ಯಾರ್ಥಿಗಳು ಪತ್ರಿಕಾ ವಿತರಣೆ ಮಾಡಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ ಎಂದ ಅವರು ಪ್ರಸ್ತುತ ಈಗ ಎರಡು ರೀತಿಯ ಮಾಧ್ಯಮಗಳಿವೆ ಒಂದು ಅಸಲಿ ಇನ್ನೊಂದು ನಕಲಿ.. ಯಾವುದು ಅಸಲಿ ಯಾವುದು ನಕಲಿ ಎಂಬುದನ್ನು ಅರಿಯಬೇಕಾಗಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಮಾತನಾಡಿ, ಹನ್ನೆರಡನೇ ಶತಮಾನದಲ್ಲಿ ಬಸವಣ್ಣ ಹುಟ್ಟು ಹಾಕಿದ ಶ್ರಮ ಸಂಸ್ಕೃತಿ ಭಾಗವಾಗಿ ನಾವೆಲ್ಲ ಇಲ್ಲಿ ಸೇರಿದ್ದೇವೆ.ಅಂದಿನ ಅನುಭವ ಮಂಟಪದಲ್ಲಿ ಎಲ್ಲ ಕಾಯಕವೂ ಶ್ರೇಷ್ಟ. ಯಾವ ಕೆಲಸವೂ ಕೀಳಲ್ಲವೆಂಬ ಸಂದೇಶವನ್ನು ವಚನಕಾರರು ಸಾರಿದ್ದರು. ಹಾಗೆಯೇ ಪತ್ರಿಕಾ ವಿತರಕರದು ಅತ್ಯಂತ ಶ್ರೇಷ್ಟವಾದ ಕೆಲಸ. ರಾಜ್ಯ, ದೇಶ, ವಿಶ್ವದ ಮೂಲೆಯಲ್ಲಿ ಆಗಿರುವ ಪ್ರಮುಖ ಘಟನಾವಳಿಗಳ ಸೂರ್ಯ ಹುಟ್ಟುವುದಕ್ಕೂ ಮೊದಲು ಓದುಗನ ಮನೆಯಂಗಳಕ್ಕೆ ತಲುಪಿಸುವ ಕೆಲಸವನ್ನು ವಿತರಕರು ಮಾಡುತ್ತಿದ್ದಾರೆ. ಮಳೆ,ಚಳಿ, ಗಾಳಿ ಲೆಕ್ಕಿಸದೆ ತಮ್ಮ ವೃತ್ತಿಯಲ್ಲಿ ನಿರತರಾಗಿದ್ದಾರೆ ಎಂದರು.

ಪತ್ರಿಕೆ ವಿತರಣೆಯಲ್ಲಿ ಎರಡು ವ್ಯವಸ್ಥೆಯಿದೆ. ಏಜೆಂಟರು ಮಾಧ್ಯಮ ಕಂಪನಿಗಳ ಜೊತೆ ಡಿಪಾಜಿಟ್ ಕಟ್ಟಿ ನಗರ ಪ್ರದೇಶದಲ್ಲಿ ಪತ್ರಿಕೆ ವಿತರಕರ ಜವಾಬ್ದಾರಿ ಹೊತ್ತರೆ, ಮನೆ ಮನೆಗೂ ಪತ್ರಿಕೆ ಹಂಚುವ ಹುಡುಗರಮತ್ತೊಂದುದಂಡುಪ್ರತ್ಯೇಕವಾಗಿ ಕಾರ್ಯನಿರ್ವಹಿಸುತ್ತದೆ.ಸರ್ಕಾರಿ ಹಾಗೂ ಖಾಸಗಿ ವಲಯದ ಉದ್ಯೋಗಿಗಳಿಗೆ ಇರುವಂತೆ ವಾರಕ್ಕೊಂದು ರಜೆ ಇವರಿಗಿರುವುದಿಲ್ಲ. ಪ್ರಮುಖ ಹಬ್ಬಗಳಂದು ಮಾಧ್ಯಮ ಸಂಸ್ಥೆಗಳು ರಜೆ ಘೋಷಣೆ ಮಾಡಿದಾಗ ಮಾತ್ರ ಇವರಿಗೆ ರಜೆ ಸಿಗುತ್ತದೆ. ಹಿಂದೆಲ್ಲ ನಾವು ಓದುವಾಗ ಅನೇಕರು ಮುಂಜಾನೆ ಸೈಕಲ್ ತುಳಿದು ಪತ್ರಿಕೆ ಹಾಕಿ ಅದರಲ್ಲಿಯೇ ಸಿಗುವ ಅಲ್ಪ ಹಣದಲ್ಲಿಯೇ ವಿದ್ಯಾಭ್ಯಾಸದ ಖರ್ಚಿಗೆ ಬಳಸಿಕೊಳ್ಳುತ್ತಿದ್ದರು. ಮನೆ ಮನೆಗೆ ಪತ್ರಿಕೆ ಹಾಕಿ ಓದಿ ವಿದ್ಯಾವಂತರಾದ ಹಾಗೂ ಸದೃಢ ಸಮಾಜ ಕಟ್ಟಿದ ಅನೇಕರು ನಮ್ಮ ಮುಂದೆ ಇದ್ದಾರೆ.

ಮಾಜಿ ರಾಷ್ಟ್ರಪತಿ ಅಬ್ದುಲ್ ಕಲಾಂ ಮನೆ ಮನೆಗೆ ಪತ್ರಿಕೆ ಹಂಚುತ್ತಿದ್ದರು.. ಪತ್ರಿಕೆ ಹಂಚಿ ವಿಧಾನಸಭೆ ಪ್ರವೇಶಿಸಿ ಜನಪ್ರತಿನಿಧಿಗಳಾದವರೂ ಇದ್ದಾರೆ. ಕೋಲಾರ ಭಾಗದಲ್ಲಿ ಮುನಿಯಪ್ಪ, ಹೊಳಲ್ಕೆರೆ ಶಾಸಕ ಚಂದ್ರಪ್ಪ ಕೂಡಾ ಒಂದು ಕಾಲದಲ್ಲಿ ಪತ್ರಿಕಾ ವಿತರಕರಾಗಿದ್ದರು.ಪತ್ರಿಕಾ ವಿತರಕರು ಅಸಂಘಟಿತ ಸಮುದಾಯವಾಗಿದ್ದಾರೆ...ರಾಜ್ಯದಲ್ಲಿ ಸುಮಾರು 40 ಸಾವಿರ ಪತ್ರಿಕಾ ವಿತರಕರು ಇದ್ದಾರೆ...ಇದರಲ್ಲಿ ಬೆಂಗಳೂರಿನಲ್ಲಿಯೇ 120 ಸ್ಥಳಗಳಲ್ಲಿ ಸುಮಾರು 6500 ಜನ ಪತ್ರಿಕೆಯನ್ನು ವಿತರಣೆ ಮಾಡುತ್ತಿದ್ದಾರೆ... ಇದೇ ಮೊದಲ ಬಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರಿಕಾ ವಿತರಕರ ನೆರವಿಗೆ ಧಾವಿಸಿದ್ದಾರೆ...ಕಾರ್ಮಿಕ ಇಲಾಖೆಯಲ್ಲಿ ಇ–ಶ್ರಮ್ ಅಡಿ ನೋಂದಣಿಗೆ ಅವಕಾಶ ಮಾಡಿಕೊಟ್ಟಿದ್ದಾರೆ...ಕರ್ತವ್ಯ ನಿರ್ವಹಿಸುವ ವೇಳೆ ಏನಾದರೂ ಅವಘಡಗಳು ಸಂಭವಿಸಿದಲ್ಲಿ ಪರಿಹಾರ ಲಭ್ಯವಾಗಲಿದೆ. ಕೋವಿಡ್ ಸಮಯದಲ್ಲಿ ವಿತರಕರು ಹಲವಾರು ತೊಂದರೆಗಳನ್ನು ಅನುಭವಿಸಿದ್ದು... ಹಲವರು ಅಗಲಿದ್ದಾರೆ...ಈ ಸಂಗತಿ ಇರಿಸಿಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ನೆರವಿಗೆ ಧಾವಿಸಿದ್ದಾರೆ. ವಿತರಕರ ಕ್ಷೇಮಾಭಿವೃದ್ಧಿಗೆ ಕನಿಷ್ಠ ಹತ್ತು ಕೋಟಿ ರುಪಾಯಿ ಹಣ ಮೀಸಲಿಡುವಂತೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿಕೊಳ್ಳುತ್ತೇನೆ.

ಸಿಎಂ ಮಾಧ್ಯಮ ವಾಕ್ತರರು ಪ್ರಭಾಕರ್ ಮಾತನಾಡಿ, ಮನೆ ಮನೆಗೆ ಪತ್ರಿಕೆಗಳನ್ನ ತಲುಪಿಸುವ ಕಾಯಕ ಪತ್ರಿಕಾ ವಿತರಕರು ಮಾಡುತ್ತ ಇದ್ದಾರೆ, ಕಾಂಗ್ರೆಸ್ ಸರ್ಕಾರದಿಂದ ಪತ್ರಿಕಟ ವಿತರಕರಿಗೆ ಏನು ಏನು ಸೌಲಭ್ಯಗಳು ಬೇಕೋ ಎಂಬುವುದರ ಬಗ್ಗೆ ಪಟ್ಟಿ ಮಾಡಿ ಸರ್ಕಾರಕ್ಕೆ ವರದಿಯನ್ನ ನೀಡಲಾಗುವುದು ವಿತರಕರಿಗೆ ಆರೋಗ್ಯ ಯಾವಗಲ್ಲೂ ಚನ್ನಾಗಿ ಇರಲಿ ಅಂತ ಎಂದು ಆಶೀಸುವೆ ವಿತರಕರ ಮಕ್ಕಳಿಗೆ ಆರೋಗ್ಯ ವ್ಯವಸ್ಥೆಯನ್ನು ಮಾಡಬೇಕಿದೆ ಅದೇ ರೀತಿಯಲ್ಲಿ ಕಡಿಮೆ ಬಡ್ಡಿ ಸಾಲದ ವ್ಯವಸ್ಥೆ ಮಾಡಬೇಕ ಎನ್ನುವುದರ ವಿತರಕ ಆಗ್ರಹವಾಗಿದೆ ಮುಂದಿನ ದಿನಗಳಲ್ಲಿ ಇವೆಲ್ಲವೂ ಆಗಲಿದೆ ಎಂದು ಹೇಳಿದರು.

ಸದರಿ ಕಾರ್ಯಕ್ರಮದಲ್ಲಿ ಶ್ರೀ ಬೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್ ನವೀನ್, ಶಾಸಕರಾದ ಕೆ.ಸಿ ವೀರೇಂದ್ರ ಪಪ್ಪಿ,ವಿ.ಆರ್.ಎಲ್ ಸಂಸ್ಥೆಯ ಮುಖ್ಯಸ್ಥರಾದ ವಿಜಯ ಸಂಕೇಶ್ವರ್, ಕಾರ್ಯನಿರತ ಪತ್ರಕರ್ತ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಪ್ರಜಾಪ್ರಗತಿ ಪತ್ರಿಕೆ ಸಂಪಾದಕರಾದ ನಾಗಣ್ಣ, ಹಿರಿಯ ಪತ್ರಿಕಾ ವಿತರಕರಾದ ಜನರಪ್ಪ, ರಾಜ್ಯಾಧ್ಯಕ್ಷರಾದ ಶಂಭುಲಿಂಗಪ್ಪ, ಚಿತ್ರದುರ್ಗ ಜಿಲ್ಲಾ ಕಾರ್ಯನಿತರ ಪತ್ರಿಕಾ ಹಂಚಿಕೆದಾರರವಿತರಕಸಂಘದಅಧ್ಯಕ್ಷರಾದ ತಿಪ್ಪೇಸ್ವಾಮಿ, ಜಿಲ್ಲಾ ಕಾರ್ಯನಿರತ ಪತ್ರಕರರ್ತರ ಸಂಘದ ಅಧ್ಯಕ್ಷರಾದ ದಿನೇಶ್ ಗೌಡಗೆರೆ, ನಗರಾಭೀವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ತಾಜ್ ಪೀರ್, ಆಮ್ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷರಾದ ಜಗದೀಶ್, ಐ.ಎಫ್,ಡಬ್ಲ್ಯೂ ಜೆಯ ಅಧ್ಯಕ್ಷರಾದ ಮಲ್ಲಿಕಾರ್ಜನ್, ಪ್ರಕಾಶ್ ನಾಯ್ಕ್, ನಾಗವೇಣಿ ಸೇರಿದಂತೆ ಇತರರು ಭಾಗವಹಿಸಿದ್ದರು. ರಾಜ್ಯದ ಎಲ್ಲಾ ಜಿಲ್ಲೆಗಳ ಪತ್ರಿಕಾ ವಿತರಕರು ಸೇರಿದಂತೆ ಸುಮಾರು 550–600 ಜನ ಭಾಗವಹಿಸಿದ್ದರು.







## ಪ್ರಮುಖ ಸುದ್ದಿ

### ಹಿಂದೂಮಹಾಗಣಪತಿ ಉತ್ಸವ ಸಮಿತಿಯಿಂದ ಚತುರ್ಭುಜ ಗಣೇಶನ ಪ್ರತಿಷ್ಠಾಪನೆ

# ಉತ್ಸವದ ಯಶಸ್ವಿಗೆ ಎಲ್ಲರೂ ಸಹಕರಿಸಿ: ಕೆ.ಸಿ.ನಾಗರಾಜು

» ಚಳ್ಳಕೆರೆ



ಕಳೆದಸುಮಾರುಆರುವರ್ಷಗಳಿಂದನಗರದ ಬಿಇಒ ಕಚೇರಿ ಆವರಣದಲ್ಲಿ ಹಿಂದೂ ಮಹಾಗಣಪತಿ ಪೂಜಾ ಕಾರ್ಯವನ್ನು ನೆರವೇರಿಸುತ್ತಿದ್ದು, ವಿಶ್ವಹಿಂದೂಪರಿಷತ್ ಹಾಗೂ ಭಜರಂಗದಳ ಸಹಯೋಗ ದೊಂದಿಗೆ ಈ ಕಾರ್ಯಕ್ರಮ ಯಶಸ್ವಿಯಾಗಿ ನಡೆಯುತ್ತಿದೆ. ಶೋಭಾಯಾತ್ರೆಯೂ ಸೇರಿ ದಂತೆ ಗಣೇಶನ ಉತ್ಸವಕ್ಕೆ ಹೆಚ್ಚಿನ ಸಹಕಾರ ನೀಡಬೇಕೆಂದು ವಿನಂತಿಸುವುದಾಗಿ ಹಿಂದೂಮಹಾಗಣಪತಿ ಉತ್ಸವ ಸಮಿತಿ ಅಧ್ಯಕ್ಷ ಕೆ.ಸಿ.ನಾಗರಾಜು ತಿಳಿಸಿದರು.

ಅವರು, ಹಿಂದೂಮಹಾಗಣಪತಿ ಮೂರ್ತಿ ಪ್ರತಿಷ್ಠಾಪನಾ ಕಾರ್ಯದಲ್ಲಿ ಭಾಗವಹಿಸಿ ಮಾತನಾಡಿದರು. ಭಕ್ತರ ಸಹಕಾರದಿಂದ ಇನ್ನೂ ಹೆಚ್ಚಿನ ಒತ್ತು ನೀಡಿ ಪೂಜಾ ಕಾರ್ಯವನ್ನು ನೆರವೇರಿಸಲಾಗುತ್ತಿದೆ. ನಾವೆಲ್ಲರೂ ಪ್ರತಿನಿತ್ಯ ಗಣೇಶನನ್ನು ಆರಾಧಿಸುವರಾಗಿದ್ದೇವೆ. ನಾಡಿನ ಕಲ್ಯಾಣಕ್ಕಾಗಿ ಈ ಕಾರ್ಯಕ್ರಮ ನಿರಂತರ ನಡೆಯಲಿದೆ ಎಂದರು.

ವಿಶ್ವಹಿಂದೂಪರಿಷತ್ ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ ಮಾತನಾಡಿ, ಈ ಬಾರಿ ಚರ್ತುಭುಜ ಗಣಪತಿಯ ಪ್ರತಿಷ್ಠಾಪನೆ ಮಾಡಲಾಗಿದೆ. ಬೆಂಗಳೂರಿನಿಂದ ಸಿದ್ದಪಡಿಸಿದ ಮೂರ್ತಿಯನ್ನು ತಂದು ಪ್ರತಿಷ್ಠಾಪಿಸಿ ಪೂಜಾ ಕಾರ್ಯವನ್ನು ನಡೆಸಲಾಗುತ್ತಿದೆ. ಸೆ.23ರಂದು ಶೋಭಾಯಾತ್ರೆಕಾರ್ಯಕ್ರಮ ಹಮ್ಮಿಕೊಂಡಿದ್ದು ತಾಲ್ಲೂಕಿನಾದ್ಯಂತ ಹೆಚ್ಚಿನ ಸಂಖ್ಯೆಯ ಗಣೇಶನ ಭಕ್ತರು, ಸಂಘ ಸಂಸ್ಥೆಗಳ ಪ್ರತಿನಿಧಿಗಳು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ವಿನಂತಿಸಿದರು. ಉತ್ಸವ ಸಮಿತಿ ಗೌರವಾಧ್ಯಕ್ಷ ಡಾ.ಅನಂತರಾಮ್‌ಗೌತಮ್, ಶೋಭಾಯಾತ್ರೆ ಸಮಿತಿ ಅಧ್ಯಕ್ಷ ಬಿ.ಎಸ್.ಶಿವಪುತ್ರಪ್ಪ, ಬಾಳೆಮಂಡಿರಾಮದಾಸ್, ಪಿ.ತಿಪ್ಪೇಸ್ವಾಮಿ, ನಗರಸಭಾ ಸದಸ್ಯರಾದ ಸಿ.ಶ್ರೀನಿವಾಸ್, ಟಿ.ಮಲ್ಲಿಕಾರ್ಜುನ್, ಸಿ.ಎಂ.ವಿಶುಕುಮಾರ್, ಕವಿತಾನಾಯಕಿ, ಡಿ.ಸೋಮಶೇಖರಮಂಡಿಮಠ, ಜೆ.ಪಿ.ಜಯಪಾಲಯ್ಯ, ಕಾರ್ಯದರ್ಶಿ ಕೆ.ಎಂ.ಯತೀಶ್, ಮಾತೃಶ್ರೀಎನ್.ಮಂಜುನಾಥ, ಬಾಬು, ಚಿದಾನಂದ, ಕರೀಕೆರೆತಿಪ್ಪೇಸ್ವಾಮಿ, ಲಕ್ಷ್ಮಿಶ್ರೀವತ್ಸ, ಮಂಜುಳಾನಾಗರಾಜು, ಗುತ್ತಿಗೆದಾರ ವಿಜಯೇಂದ್ರಪ್ಪ, ಹನುಮಂತಪ್ಪ, ಜಗದೀಶ್, ಉಮೇಶ್, ಮಹಂತೇಶ್, ರಿಯಲ್‌ಎಸ್ಟೇಟ್ ಉದ್ಯಮಿ ರೇವಣ್ಣ, ಟಿ.ತಿಮ್ಮಪ್ಪ ಉಪಸ್ಥಿತರಿದ್ದರು.

# ಹಿರಿಯರ ಅನುಭವ, ಶಕ್ತಿ, ಸಾಮರ್ಥ್ಯಗಳ ಸದ್ಬಳಕೆ ಸಮಾಜ ಪಡೆಯಲಿ: ಮಹಾವೀರ ಮಾ.ಕರೆಣ್ಣವರ್

» ದಾವಣಗೆರೆ

ರಾಷ್ಟ್ರೀಯ ಸಾಮಾಜಿಕ ನೆರವು ಕಾರ್ಯಕ್ರಮದಡಿ ಬಡ ಕುಟುಂಬದಲ್ಲಿನ ವೃದ್ಧರ ಜೀವನ ಆಧಾರಕ್ಕಾಗಿ ರಾಷ್ಟ್ರೀಯ ವೃದ್ಧಾಪ್ಯ ಪಿಂಚಣಿ ಯೋಜನೆ, ರಾಷ್ಟ್ರೀಯ ಕುಟುಂಬ ಸೌಲಭ್ಯ, ರಾಷ್ಟ್ರೀಯ ಮಾತೃತ್ವ ಸೌಲಭ್ಯಗಳ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮಾ.ಕರೆಣ್ಣವರ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ದಾವಣಗೆರೆ ಜಿಲ್ಲಾ ಹಿರಿಯ ನಾಗರೀಕರ ಸಂಘ ಹಾಗೂ ಹಿರಿಯ ನಾಗರೀಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಗರದ ಎಂಸಿಸಿ ಬಿ ಬ್ಲಾಕಿನಲ್ಲಿರುವ ಬಾಪೂಜಿ ಶಾಲೆಯ ಮೈದಾನದಲ್ಲಿ ಭಾನುವಾರ ವಿಶ್ವ ಹಿರಿಯ ನಾಗರೀಕರ ದಿನಾಚಣೆ 2024ರ ಪ್ರಯುಕ್ತ



ನಡೆದ ಹಿರಿಯ ನಾಗರೀಕರಿಗಾರಿ ಕ್ರೀಡಾ ಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನೆ ನರವೇರಿಸಿ ಮಾತನಾಡಿದರು.

ದೇಶದಲ್ಲಿ ವೃದ್ಧರ ಸಂಖ್ಯೆ ಹೆಚ್ಚುತ್ತಿದೆ. ಅವರ ರಕ್ಷಣೆ ಸರ್ಕಾರ ಮತ್ತು ಸಮಾಜಿಕ ಸಂಘಟನೆಗಳ ಜವಾಬ್ದಾರಿಯಾಗಿದೆ. ಅವರ ಅನುಭವ, ಶಕ್ತಿ, ಸಾಮರ್ಥ್ಯಗಳನ್ನು ಸಮಾಜ ಸದ್ಬಳಕೆ ಮಾಡಿಕೊಳ್ಳಬೇಕು. ಹಿರಿಯ ನಾಗರೀಕರ ಕಾಯಿದೆ 2007 ಮತ್ತು ವೃದ್ಧರ ಪಾಲನೆ ಪೋಷಣೆ ಕುರಿತ ಯೋಜನೆಗಳು ಜಾರಿಯಲ್ಲಿ ಇದ್ದರೂ ಸಹ ನಿರ್ಲಕ್ಷಿತ ವೃದ್ಧರ ಸಂಖ್ಯೆ ಹೆಚ್ಚಾಗುತ್ತಿರುವುದು ವಿಷಾಧನೀಯ ಎಂದರು.

ನಿವೃತ್ತ ಪೊಲೀಸ್ ಅಧೀಕ್ಷಕ ರವಿ ನಾರಾಯಣ್ ಮಾತನಾಡಿ, ಹಿರಿಯ ನಾಗರೀಕರ ಬಗ್ಗೆ ಸಮಾಜದಲ್ಲಿ ಗೌರವಾದರಗಳು ಕಡಿಮೆ ಆಗುತ್ತಿದ್ದು, ಅವರ ಅನುಭವದ ಸೇವಯನ್ನು ಪರಿಗಣಿಸುತ್ತಿಲ್ಲ. ಅಲ್ಲದೇ ಹಿರಿಯ ನಾಗರೀಕರಿಗಾಗಿ ಇರುವ ಸೌಲಭ್ಯಗಳನ್ನು ಇತ್ತೀಚೆಗೆ ಸರ್ಕಾರಗಳು ಮೊಟಕು ಮಾಡಲಾಗುತ್ತಿದೆ. ಹಿರಿಯ ನಾಗರೀಕರಿಗಾಗಿ ರೈಲ್ವೆ ಪ್ರಯಾಣದಲ್ಲಿ ರಿಯಾಯಿತಿ ಕಡಿಮೆ, ವೃದ್ಧರು ತಮ್ಮ ಜೀವನಾಸರೆಗಾಗಿ ಬ್ಯಾಂಕುಗಳಲ್ಲಿ ಇಟ್ಟಿರುವ ಠೇವಣಿ ಮೇಲಿನ ಬಡ್ಡಿಯನ್ನು ಕಡಿತ ಮಾಡಿರುವುದು ಖಂಡನೀಯ ಎಂದರು. ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಮಾತನಾಡಿ, ಕರ್ನಾಟಕದಲ್ಲಿ 58 ಲಕ್ಷ ಜನ ಹಿರಿಯ ನಾಗರೀಕರಿದ್ದಾರೆ. ಸಮಾಜದಲ್ಲಿನ ಅನ್ಯಾಯ, ಶೋಷಣೆ, ಭ್ರಷ್ಠಾಚಾರಗಳ ವಿರುದ್ಧ ಹಿರಿಯ ನಾಗರೀಕರು ಸಂಘಟಿತರಾಗಿ ಧ್ವನಿ ಎತ್ತಬೇಕಾಗಿದೆ. ಸಮಾಜವು ಮತ್ತು ಇಂದಿನ ಯುವ ಜನತೆ ಹಿರಿಯ ನಾಗರೀಕರಿಗೆ ಗೌರವ, ರಕ್ಷಣೆ ನೀಡಬೇಕಾಗಿದ್ದು, ಅವರ ಘನತೆಯುತ ಬದುಕಿಗೆ ಧಕ್ಕೆ ಆಗದಂತೆ ನೋಡಿಕೊಳ್ಳಬೇಕಾಗಿದೆ. ಹಿರಿಯರು ತಮ್ಮ ಪರವಾಗಿ ಇರುವ ಕಾನೂನುಗಳನ್ನು ದುರುಪಯೋಗ ಮಾಡಿಕೊಳ್ಳಬಾರದು. ಅನಿವಾರ್ಯ ಸಂದರ್ಭದಲ್ಲಿ ಕಾನೂನಿನ ಮೊರೆ ಹೋಗಬೇಕೆಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ದಾವಣಗೆರೆ ಜಿಲ್ಲಾ ಹಿರಿಯ ನಾಗರೀಕರ ಸಂಘದ ಗೌರವ ಕಾರ್ಯದರ್ಶಿ ಎಸ್. ಗುರುಮೂರ್ತಿ, ದಾವಣಗೆರೆ ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಕೆ.ಜಿ.ಭರತ್‌ರಾಜ್, ಜಿಲ್ಲಾ ವಿಕಲಚೇತನರ, ಹಿರಿಯ ನಾಗರೀಕರ ಸಬಲೀಕರಣ ಅಧಿಕಾರಿ ಕೆ.ಕೆ.ಪ್ರಕಾಶ್ ಇದ್ದರು.



ಚಳ್ಳಕೆರೆ ನಗರದ ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ)ರವರ ಮನೆಗೆ ಕನ್ನಡ ಚಿತ್ರರಂಗದ ಖ್ಯಾತನಟ ಧ್ರುವಸರ್ಜಾ ಭೇಟಿ ನೀಡಿದ್ದರು. ಕನ್ನಡ ಚಿತ್ರರಂಗದ ಖ್ಯಾತನಟ ಧ್ರುವಸರ್ಜಾ ಚಿತ್ರದುರ್ಗ ಕ್ಷೇತ್ರದ ಶಾಸಕ, ಧ್ರುವಸರ್ಜಾರ ಆಪ್ತಸ್ನೇಹಿತ ಕೆ.ಸಿ.ವೀರೇಂದ್ರ(ಪಪ್ಪಿ)ರವರ ಮನೆಗೆ ಭೇಟಿ ನೀಡಿ ಕೆಲಗಂಟೆಗಳ ಕಾಲ ಅವರೊಂದಿಗೆ ಚರ್ಚೆ ನಡೆಸಿ, ಗಾಂಧಿನಗರದ ಸರ್ವಧರ್ಮ ಗಣಪತಿ ಮೂರ್ತಿ ಪ್ರತಿಷ್ಠಾಪನಾ ಕಾರ್ಯದಲ್ಲಿ ಪಾಲ್ಗೊಂಡಿದ್ದರು. ಗಾಂಧಿನಗರದ ಸರ್ವಧರ್ಮಗಣಪತಿ ಸಮಿತಿ ಅಧ್ಯಕ್ಷ, ನಗರಸಭಾ ಸದಸ್ಯ ಹೊಯ್ಸಳಗೋವಿಂದ, ಮುರುಳಿ ಇನ್ನಿತರರು ಉಪಸ್ಥಿತರಿದ್ದರು.

## ಗೊಲ್ಲನೌಕರರ ಸಂಘದ ನೂತನ ಅಧ್ಯಕ್ಷರಾಗಿ, ಶಿಕ್ಷಕ ಶ್ರೀಕಾಂತ್ ಆಯ್ಕೆ



» ಚಳ್ಳಕೆರೆ

ತಾಲ್ಲೂಕಿನ ಗೊಲ್ಲ ನೌಕರರ ಸಂಘದ ನೂತನ ಅಧ್ಯಕ್ಷರಾಗಿ, ಶಿಕ್ಷಕ ಕೆ.ಎಸ್.ಶ್ರೀಕಾಂತ್ ಆಯ್ಕೆಯಾಗಿದ್ದಾರೆ. ಕಳೆದ ಹಲವಾರು ವರ್ಷಗಳಿಂದ ಗೊಲ್ಲ ನೌಕರರ ಸಂಘದಲ್ಲಿ ಹಲವಾರು ಹುದ್ದೆಯನ್ನು ನಿಬಾಯಿಸಿದ ಅವರಿಗೆ ಅಧ್ಯಕ್ಷಸ್ಥಾನವನ್ನು ನೀಡಲಾಗಿದೆ.

ಗೊಲ್ಲನೌಕರರ ಸಂಘದ ಗೌರವಾಧ್ಯಕ್ಷರಾಗಿ ಡಾ.ಮಂಜುನಾಥಯಾದವ್, ಕಾರ್ಯಾಧ್ಯಕ್ಷರಾಗಿ ಸಿ.ಕೆ.ವೆಂಕಟೇಶ್, ಉಪಾಧ್ಯಕ್ಷರಾಗಿ ಸಿ.ಜಯಮ್ಮ, ಬಾಲರಾಜು, ಕಾರ್ಯದರ್ಶಿಯಾಗಿ ಎಸ್.ನಾಗರಾಜು, ಸಂಘಟನಾ ಕಾರ್ಯದರ್ಶಿಯಾಗಿ ಕೆ.ಬಸವರಾಜು, ಈ.ಮುರುಗೇಶ್, ಸಹಕಾರ್ಯದರ್ಶಿ ಎಸ್.ಸವಿತಾ, ಖಜಾಂಚಿಯಾಗಿ ಕೆ.ವೀರಭದ್ರಪ್ಪ ಹಾಗೂ 12 ನೂತನ ನಿರ್ದೇಶಕರನ್ನು ಆಯ್ಕೆ ಮಾಡಲಾಯಿತು.

ನೂತನ ಗೊಲ್ಲನೌಕರರ ಸಂಘದ ಅಧ್ಯಕ್ಷ ಕೆ.ಎಸ್.ಶ್ರೀಕಾಂತ್ ಮಾತನಾಡಿ, ಸಮುದಾಯದ ಎಲ್ಲಾ ಮುಖಂಡರು ಸೇರಿ ನನಗೆ ಗೊಲ್ಲನೌಕರರ ಸಂಘದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆ. ಗೊಲ್ಲನೌಕರರ ಸಂಘಟನೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು. ನಿರ್ದೇಶಕರಾಗಿ ಮನೋಹರ, ಡಿ.ಈರಣ್ಣ, ಈ.ರಾಜಣ್ಣ, ಶಿವಮಂಗಳಮ್ಮ, ಎಸ್.ವೃಷಬೇಂದ್ರಪ್ಪ, ಕಾಂತರಾಜು, ಚಿತ್ತಯ್ಯ, ಜಿ.ಕೆ.ಶಿವಣ್ಣ, ಈರಗಟ್ಟಯ್ಯಪ್ಪ, ನರಸಿಂಹಪ್ಪ, ಕೆ.ಶಿವಣ್ಣ, ಈರಣ್ಣ, ಎಸ್.ವಿ.ನಾಗೇಂದ್ರಪ್ಪ, ರಾಮಚಂದ್ರಪ್ಪ ಮುಂತಾದವರು ಆಯ್ಕೆಯಾದರು.

## ಕಪಟಿಗಳ ದ್ವೇಷದ ಪಿತೂರಿಗೆ ಮಹನೀಯರ ಮಾನವೀಯ ಆಶಯಗಳು ಬಲಿಯಾಗಬಾರದು: ಸಿಎಂ ಕರೆ

» ಬೆಂಗಳೂರು

ಕರ್ನಾಟಕ ರಾಜ್ಯ ಕುವೆಂಪು, ಅಂಬೇಡ್ಕರ್, ಬಸವಣ್ಣನವರ ಮಾನವೀಯಮೌಲ್ಯದನೆಲೆಯಾಗಿದೆ ಎಂದುಮುಖ್ಯಮಂತ್ರಿಸಿದ್ದರಾಮಯ್ಯ ಅವರು ಬಣ್ಣಿಸಿದರು.

ಶಿವಾಜಿನಗರದ ಐತಿಹಾಸಿಕ ಬೆಸಿಲಿಕಾ ಚರ್ಚ್ ನಲ್ಲಿ ನಡೆದ ಸೇಂಟ್ ಮೇರಿ ಅಮ್ಮನವರ ಹುಟ್ಟು ಹಬ್ಬದ ಆಚರಣೆಯನ್ನು ಉದ್ಘಾಟಿಸಿ ಮಾತನಾಡಿದರು. ಕಪಟಿಗಳ ದ್ವೇಷದ ಪಿತೂರಿಗೆ ಮಹನೀಯರ ಮಾನವೀಯ ಆಶಯಗಳು ಬಲಿಯಾಗಬಾರದು. ಪರಸ್ಪರ ಸಹಬಾಳ್ವೆ, ಸೌಹಾರ್ದದ ಬೆಸುಗೆಯನ್ನು ನಾವೆಲ್ಲರೂ ಗಟ್ಟಿಗೊಳಿಸಬೇಕು ಎಂದು ಕರೆ



ನೀಡಿದರು.

ಶಿವಾಜಿನಗರದ ಬೆಸಿಲಿಕಾ ಮಂದಿರ ಚಾರಿತ್ರಿಕವಾಗಿ ಸೌಹಾರ್ದ ಮಂದಿರವಾಗಿದೆ. ಎಲ್ಲಾ ಜಾತಿಯ, ಎಲ್ಲಾ ಧರ್ಮದವರು ಈ ಪ್ರಾರ್ಥನಾ ಮಂದಿರಕ್ಕೆ ನಿರಂತರವಾಗಿ ಬಂದು ಹೋಗುತ್ತಿರುವುದೇ ಈ ಮಂದಿರದ ಸೌಹಾರ್ದ ಪರಂಪರೆಗೆ ಸಾಕ್ಷಿ ಎಂದರು. ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಕ್ರೈಸ್ತ ಧರ್ಮ ಗುರುಗಳ ಮತ್ತು ಸಂಸ್ಥೆಗಳ ಕೊಡುಗೆಯನ್ನು ಪ್ರತಿಯೊಬ್ಬರೂ ಮೆಚ್ಚಿಕೊಳ್ಳುತ್ತಾರೆ. ಇವರ ಈ ಸಾಮಾಜಿಕ ಕಾರ್ಯ ಪ್ರತಿಯೊಬ್ಬರಿಗೂ ಮಾದರಿಯಾಗಲಿ ಎಂದು ಹರೈಸಿದರು. ಬೆಸಿಲಿಕಾ ಚರ್ಚ್ ನ ಪುನರುಜ್ಜೀವನಕ್ಕೆ ಐದು ಕೋಟಿಗಳ ನೆರವನ್ನು ನೀಡಲಾಗುವುದು ಎಂದು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

ಶಾಸಕರಾದ ರಿಜ್ವಾನ್ ಅರ್ಷದ್ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮ ಆರ್ಚ್ ಬಿಷಪ್ ಡಾ.ಪೀಟರ್ ಮಚಾಡೊ ಅವರು ದಿವ್ಯ ಸಾನಿಧ್ಯ ವಹಿಸಿದ್ದರು. ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಅವರು ಮುಖ್ಯ ಅತಿಥಿಗಳಾಗಿದ್ದರು.



ಭದ್ರಾವತಿ: ಭದ್ರಾವತಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಮುಖಂಡರೂ, ಹಿಂದೂ ಮಹಾಸಭಾ, ಹಿಂದೂ ರಾಷ್ಟ್ರ ಸೇನಾ ಅಧ್ಯಕ್ಷರಾಗಿದ್ದ ನಗರಸಭಾ ಸದಸ್ಯ ವಿ.ಕದಿರೇಶಿ ಅವರು ಹಿಂದೂ ರಾಷ್ಟ ಸೇನೆ ಮತ್ತು ಹಿಂದೂ ಮಹಾಸಭಾ ತೊರೆದು ಶಾಸಕರಾದ ಬಿ.ಕೆ.ಸಂಗಮೇಶ್ ನೇತೃತ್ವದಲ್ಲಿ ಕಾಂಗ್ರೆಸ್ ಸೇರ್ಪಡೆಗೊಂಡರು. ಇವರ ಜೊತೆಗೆ ಪುತ್ರ ಬಿಜೆಪಿಯ ಹಿಂದುಳಿದ ವರ್ಗ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿದ್ದ ಕೆ. ಮಂಜುನಾಥ್, ಹಾಲಿ ಬಿಜೆಪಿ ನಗರಸಭಾ ಸದಸ್ಯರಾದ ಅನಿತಾ ಮಲ್ಲೇಶ್, ಶಶಿಕಲಾ ನಾರಾಯಣಪ್ಪ ಅವರೂ ಕಾಂಗ್ರೆಸ್ ಸೇರ್ಪಡೆಗೊಂಡರು.

ಪ್ರಮುಖ ಸುದ್ದಿ

# ಈ ವರ್ಷ ವಾಡಿಕೆಗಿಂತ ಶೇ.8ರಷ್ಟು ಹೆಚ್ಚು ಮಳೆ

» ಬೆಂಗಳೂರು

ನೈಋತ್ಯ ಮುಂಗಾರು ಮಳೆ 2024ರಲ್ಲಿ ದೇಶದ ಜನರಿಗೆ ನಿರಾಸೆ ಮೂಡಿಸಿಲ್ಲ. ಜೂನ್ 1ರಿಂದ ಸೆಪ್ಟೆಂಬರ್ 30ರ ತನಕ ಭಾರತದಲ್ಲಿ ಮುಂಗಾರು ಮಳೆ ಅವಧಿ ಎಂದು ಲೆಕ್ಕಾಚಾರ ಹಾಕಲಾಗುತ್ತದೆ. ಈ ಬಾರಿ ಇದುವರೆಗೂ ದೇಶಾದ್ಯಂತ ವಾಡಿಕೆಗಿಂತ ಶೇ 8ರಷ್ಟು ಹೆಚ್ಚು ಮಳೆಯಾಗಿದೆ. ಕರ್ನಾಟಕ ರಾಜ್ಯದಲ್ಲಿಯೂ ಮಳೆ ಉತ್ತಮವಾಗಿಯೇ ಸುರಿದಿದ್ದು, ಹಲವು ಜಿಲ್ಲೆಗಳಲ್ಲಿ ಈಗಲೂ ಮಳೆಯಾಗುತ್ತಿದೆ.

ಈ ತಿಂಗಳ ಅಂತ್ಯಕ್ಕೆ ನೈಋತ್ಯ ಮುಂಗಾರು ಮಳೆಯ ಅವಧಿ ಮುಕ್ತಾಯವಾಗುತ್ತದೆ. ಸೆಪ್ಟೆಂಬರ್ 7ರ ಮಾಹಿತಿಯಂತೆ ದೇಶದ ವಿವಿಧ ರಾಜ್ಯಗಳಲ್ಲಿ ಈ ಬಾರಿ ವಾಡಿಕೆಗಿಂತ ಹೆಚ್ಚಿನ ಮಳೆಯೇ ಸುರಿದಿದೆ. ರಾಜಸ್ಥಾನದಲ್ಲಿ ಶೇ 57ರಷ್ಟು ಹೆಚ್ಚು ಮಳೆಯಾಗಿದ್ದರೆ, ಮಣಿಪುರದಲ್ಲಿ ಶೇ 30ರಷ್ಟು ಮಳೆ ಕೊರತೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಸಾಮಾನ್ಯವಾಗಿ ಸೆಪ್ಟೆಂಬರ್ 17 ರಿಂದ



ಅಕ್ಟೋಬರ್ 15ರ ಅವಧಿಯಲ್ಲಿ ದೇಶದಲ್ಲಿ ನೈಋತ್ಯ ಮುಂಗಾರು ಮಾರುತಗಳ ಅವಧಿ ಅಂತ್ಯಗೊಳ್ಳುತ್ತದೆ. ಇದು ಕೇವಲ ವಾಡಿಕೆಯ ದಿನಾಂಕಗಳಾಗಿದ್ದು, ಕಳೆದ ವರ್ಷ ಸೆಪ್ಟೆಂಬರ್ 25ಕ್ಕೆ ಮುಂಗಾರು ಅವಧಿ ಅಂತ್ಯಗೊಂಡಿತ್ತು. ಆದರೆ ಈ ಬಾರಿ ಮುಂಗಾರು ಅವಧಿ ಅಕ್ಟೋಬರ್ 15ರ ತನಕ ವಿಸ್ತರಣೆಗೊಳ್ಳುವ ಮುನ್ಸೂಚನೆಯೂ ಸಿಕ್ಕಿದೆ.

ಸೆಪ್ಟೆಂಬರ್ 7ರ ತನಕ ದೇಶಾದ್ಯಂತ ಸುರಿದ ಹೆಚ್ಚುವರಿ ಶೇ 8ರಷ್ಟು ಮಳೆ ಕೃಷಿಕ ಸಮುದಾಯಕ್ಕೆ ಸಂತಸ ತಂದಿದೆ. ದೇಶದ ಆರ್ಥಿಕತೆಗೆ ಸಹಕಾರಿಯಾಗಿದೆ. ಆದರೆ ಮಣಿಪುರದಲ್ಲಿ ಉಂಟಾಗಿರುವ ಮಳೆ ಕೊರತೆ ಕುಡಿಯುವ ನೀರಿನ ಸಮಸ್ಯೆ, ಕೃಷಿ ಚಟುವಟಿಕೆಗಳ ಮೇಲೆ ಪ್ರಭಾವ ಬೀರುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ.

ಯಾವ ರಾಜ್ಯದಲ್ಲಿ ಎಷ್ಟು ಮಳೆ?; ಭಾರತದ ವೈವಿಧ್ಯಮಯ ಹವಾಮಾನ ಪರಿಸ್ಥಿತಿಗೆ ಅನುಗುಣವಾಗಿ ಮಳೆ ಪ್ರಮಾಣವನ್ನು 5 ಭಾಗವಾಗಿ ವಿಂಗಡನೆ ಮಾಡಲಾಗಿದೆ. ಭಾರೀ ಮಳೆ ಕೊರತೆ, ಮಳೆ ಕೊರತೆ, ಸಾಮಾನ್ಯ ಮಳೆ, ಹೆಚ್ಚುವರಿ ಮಳೆ, ಅಧಿಕ ಮಳೆ ಎಂದು ಹವಾಮಾನ ಇಲಾಖೆ ವಿಂಗಡನೆ ಮಾಡುತ್ತದೆ. ಆದರೆ ಈ ವರ್ಷ ಈ ಮಾನದಂಡಗಳ ಅನ್ವಯ ದೇಶದ ಯಾವುದೇ ರಾಜ್ಯದಲ್ಲಿ ಭಾರೀ ಮಳೆ ಕೊರತೆ ಎದುರಾಗಿಲ್ಲ.

ಮಣಿಪುರ ಶೇ 30, ಬಿಹಾರ ಶೇ 26, ಪಂಜಾಬ್ ಶೇ 23 ಮತ್ತು ಜಮ್ಮು & ಕಾಶ್ಮೀರ ಶೇ 20ರಷ್ಟು ಮಳೆಯ ಕೊರತೆಯನ್ನು ಎದುರಿಸುತ್ತಿದೆ. ಇದೇ ಮಾದರಿಯಲ್ಲಿ ಹಿಮಾಚಲ ಪ್ರದೇಶ ಮತ್ತು ಅರುಣಾಚಲ ಪ್ರದೇಶದಲ್ಲಿ ಕ್ರಮವಾಗಿ ಶೇ 21 ಮತ್ತು ಶೇ 22ರಷ್ಟು ಕೊರತೆ ಕಂಡುಬಂದಿದೆ. ಉತ್ತರ ಪ್ರದೇಶದಲ್ಲಿ ವಾಡಿಕೆಗಿಂತ ಶೇ 14, ಅಸ್ಸಾಂನಲ್ಲಿ ಶೇ 13 ಮತ್ತು ಹರ್ಯಾಣ ಮತ್ತು ಕೇರಳದಲ್ಲಿ ಶೇ 10ರಷ್ಟು ಮಳೆ ಕೊರತೆಯಾಗಿದೆ.

ಅತಿ ಹೆಚ್ಚು ಮಳೆ ಸುರಿದ ರಾಜ್ಯಗಳ ಪಟ್ಟಿಯಲ್ಲಿ ರಾಜಸ್ಥಾನ ಮೊದಲ ಸ್ಥಾನದಲ್ಲಿದೆ. ಶೇ 57ರಷ್ಟು ಹೆಚ್ಚು ಮಳೆ ರಾಜ್ಯದಲ್ಲಿ ಸುರಿದಿದೆ. ಉಳಿದಂತೆ ತಮಿಳುನಾಡು, ಗುಜರಾತ್ ರಾಜ್ಯಗಳಲ್ಲಿ ಶೇ 51ರಷ್ಟು ಹೆಚ್ಚು ಮಳೆ ನೈಋತ್ಯ ಮುಂಗಾರು ಅವಧಿಯಲ್ಲಿ ಸುರಿದಿದೆ.

ಗೋವಾದಲ್ಲಿ ಶೇ 45, ಲಡಾಕ್ ಶೇ 44, ಆಂಧ್ರ ಪ್ರದೇಶ ಶೇ 42, ತೆಲಂಗಾಣ ಶೇ 40, ಮಹಾರಾಷ್ಟ್ರ ಶೇ 28, ಕರ್ನಾಟಕ ಶೇ 23, ತ್ರಿಪುರ ಶೇ 22, ಸಿಕ್ಕಿಂ ಶೇ 21 ಹೆಚ್ಚುವರಿ ಮಳೆ ಸೆಪ್ಟೆಂಬರ್ 7ರ ತನಕ ದಾಖಲಾಗಿದೆ. ಕರ್ನಾಟಕದಲ್ಲಿ ಸೆಪ್ಟೆಂಬರ್ ಅಂತ್ಯದ ತನಕವೂ ಸಾಮಾನ್ಯ ಮಳೆ ಮುಂದುವರೆಯುವ ನಿರೀಕ್ಷೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರ್ನಾಟಕದಲ್ಲಿ 2023ರಲ್ಲಿ ನೈಋತ್ಯ ಮುಂಗಾರು ಕೈಕೊಟ್ಟು ಬರ ಪರಿಸ್ಥಿತಿ ಎದುರಾಗಿತ್ತು. ಆದರೆ ಈ ವರ್ಷದ ಮೇ ತಿಂಗಳಿನಲ್ಲಿ ಪೂರ್ವ ಮುಂಗಾರು ಮಳೆ ಕೆಲವು ಜಿಲ್ಲೆಗಳಲ್ಲಿ ಉತ್ತಮವಾಗಿ ಸುರಿದು ಜನರಲ್ಲಿ ಮುಂಗಾರು ಮಳೆ ಉತ್ತಮವಾಗುವ ಭರವಸೆ ಮೂಡಿಸಿತ್ತು.

ಜೂನ್ ಮತ್ತು ಜುಲೈ ತಿಂಗಳಿನಲ್ಲಿ ರಾಜ್ಯದಲ್ಲಿ ಉತ್ತಮ ಮಳೆಯಾಗಿದ್ದು, ಎಲ್ಲಾ ಡ್ಯಾಂಗಳು ಭರ್ತಿಯಾಗಿವೆ. ಈ ಬಾರಿಯ ಮಳೆ ಕೃಷಿ ಚಟುವಟಿಕೆಗಳಿಗೆ ಸಹ ಅಪಾರ ಕೊಡುಗೆ ನೀಡಿದ್ದು, ರೈತರು ಈ ವರ್ಷ ಸಂತಸಗೊಂಡಿದ್ದಾರೆ. ಡ್ಯಾಂಗಳು ಭರ್ತಿಯಾಗಿರುವ ಕಾರಣ ಎರಡನೇ ಬೆಳೆಗೆ ಸಹ ನೀರು ದೊರೆಯುವ ಭರವಸೆಯಲ್ಲಿದ್ದಾರೆ.

## ಫಾಸ್ಟ್ ನ್ಯೂಸ್

### ಸೆ.11 ರಂದು ನೇರ ನೇಮಕಾತಿ ಸಂದರ್ಶನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಇದೇ ಸೆ.11ರಂದು ಬೆಳಿಗ್ಗೆ 10.30 ರಿಂದ 3 ರವರೆಗೆ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಸಂದರ್ಶನದಲ್ಲಿ 3ಕ್ಕೂ ಹೆಚ್ಚು ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮಾ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು 3 ಬಯೋಡಾಟಾ ಪ್ರತಿಗಳು, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು, ಅಗತ್ಯ ದಾಖಲೆಗಳು ಹಾಗೂ ಫೋಟೋಗಳೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಹಳೇ ಸ್ಟೇಡಿಯಂ ರಸ್ತೆಯಲ್ಲಿನ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 9945587060, 7019759147 ಗೆ ಸಂಪರ್ಕಿಸಬಹುದು.

### ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಸಮಾರೋಪ

» ಚಿತ್ರದುರ್ಗ

ಬಸವೇಶ್ವರ ಪುನರ್ ಜ್ಯೋತಿ ಐ ಬ್ಯಾಂಕ್ (ರಿ) ಚಿತ್ರದುರ್ಗ ಬಸವೇಶ್ವರ ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಚಿತ್ರದುರ್ಗ ಬಸಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಚಿತ್ರದುರ್ಗ ಇವರುಗಳ ಸಹಯೋಗದೊಂದಿಗೆ 39 ನೇ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ 2024 ಸಮಾರೋಪ ಸಮಾರಂಭವು ಸೆ. 9 ಸೋಮವಾರ ಮಧ್ಯಾಹ್ನ 12.30 ಕ್ಕೆ ತುರುವನೂರು ರಸ್ತೆಯ ಬಸಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಬಸವೇಶ್ವರ ಪುನರ್ ಜ್ಯೋತಿ ಐ ಬ್ಯಾಂಕ್‌ನ ಸಂಚಾಲಕರಾದ ಎಸ್.ವೀರೇಶ್ ನೇರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ಬಸಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥರಾದ ಡಾ॥ ರವಿ ರಂಗಾರೆಡ್ಡಿ ವಹಿಸಲಿದ್ದಾರೆ, ಬಸವೇಶ್ವರ ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ನೇತ್ರ ತಜ್ಞರಾದ ಡಾ ॥ ಅನುಶ್ರೀ ಉಪನ್ಯಾಸ ನೀಡಲಿದ್ದಾರೆ, ಬಸವೇಶ್ವರ ಪುನರ್ ಜ್ಯೋತಿ ಐ ಬ್ಯಾಂಕ್‌ನ ನಿರ್ದೇಶಕರಾದ ಃ.ಖ.ಕನಕರಾಜ್, ಖ.ಗಿ. ಗುರುಮೂರ್ತಿ, ಕಾರ್ಯದರ್ಶಿಗಳಾದ ಖಿ.ವೀರಭದ್ರಸ್ವಾಮಿ ಭಾಗವಹಿಸಲಿದ್ದಾರೆ.

### ಶೌರ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

2024ನೇ ಸಾಲಿನ ಮಕ್ಕಳ ದಿನಾಚರಣೆ ಅಂಗವಾಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಹೊಯ್ಸಳ ಹಾಗೂ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ, ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ನಾಮ ನಿರ್ದೇಶನಕ್ಕಾಗಿ ಅರ್ಜಿ ಆಹ್ವಾನಿಸಾಗಿದೆ. ಪ್ರಾಣದ ಹಂಗು ತೊರೆದು, ಸಮಯ ಪ್ರಜ್ಞೆಯಿಂದ ಇತರ ವ್ಯಕ್ತಿಗಳ ಪ್ರಾಣ ರಕ್ಷಿಸಿ ಸಾಹಸ ಪ್ರದರ್ಶಿಸಿದ 6 ರಿಂದ 18 ವರ್ಷದೊಳಗಿನ ಬಾಲಕರಿಗೆ ಹೊಯ್ಸಳ ಹಾಗೂ ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ನೀಡಲಾಗುವುದು. ಸಾಹಸ ಘಟನೆಯು 1 ಆಗಸ್ಟ್ 2023 ರಿಂದ 31 ಜುಲೈ 2024ರ ಒಳಗೆ ನಡೆದಿರಬೇಕು. 1 ಆಗಸ್ಟ್ 2006 ರಂದು ಹಾಗೂ ನಂತರ ಜನಿಸಿದ ಮಕ್ಕಳು ಪ್ರಶಸ್ತಿಗೆ ಅರ್ಹರಾಗಿರುತ್ತಾರೆ. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000 ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಲಾಗುವುದು. ಮಕ್ಕಳ ಕ್ಷೇತ್ರದಲ್ಲಿ ಅತ್ಯತ್ತಮ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ತಲಾ ರೂ.25,000 ಹಾಗೂ ಸಂಸ್ಥೆಗಳಿಗೆ ತಲಾ ರೂ.10,000 ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು. ಅರ್ಜಿ ನಮೂನೆಯನ್ನು ಚಿತ್ರದುರ್ಗ ನಗರದ ಸ್ಟೇಡಿಯಂ ಹತ್ತಿರದ ಜಿಲ್ಲಾ ಬಾಲಭವನದ ಆವರಣದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಕಚೇರಿಯಿಂದಪಡೆಯಬಹುದು. ಅರ್ಜಿಯನ್ನು ಕನ್ನಡ ಭಾಷೆಯಲ್ಲಿಯೇ ಭರ್ತಿ ಮಾಡಿ, ಸೆಪ್ಟೆಂಬರ್ 20 ರ ಒಳಗಾಗಿ ಕಚೇರಿ ಸಲ್ಲಿಸುವಂತೆ ಉಪನಿರ್ದೇಶಕಿ ಭಾರತಿ ಬಣಕಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಹಾಯಧನ ಅರ್ಜಿ ಆಹ್ವಾನ

■ ಚಿತ್ರದುರ್ಗ

2024–25ನೇ ಸಾಲಿಗೆ ಪರಿಶಿಷ್ಟ ಜಾತಿ ಉಪಯೋಜನೆ ಅಡಿಯಲ್ಲಿ ಅಂತರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದ ಅಧಿಕೃತ ಕ್ರೀಡಾ ಕೂಟಗಳಲ್ಲಿ ಪದಕವಿಜೇತರಾದಪರಿಶಿಷ್ಟಜಾತಿಕ್ರೀಡಾಪಟುಗಳಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಜಿಮ್ ಸ್ಥಾಪನೆಗೆ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿ ಮಾಡಿ ತರಬೇತುದಾರರಿಂದ ಪರಿಶೀಲಿಸಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಿಂದ ದೃಢೀಕರಿಸಿ ಸೆ.27ರೊಳಗಾಗಿ, ಬೆಂಗಳೂರಿನ ಕೇಂದ್ರ ಕಚೇರಿಗೆ ಕಳುಹಿಸಿಕೊಡುವಂತೆ ಸೂಚಿಸಿದೆ. ಕೇಂದ್ರ ಕಚೇರಿಗೆ ನೇರವಾಗಿ ಬಂದ ಅರ್ಜಿಗಳನ್ನು ಹಾಗೂ ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.



# ಬಾರು ಮತ್ತು ಗ್ರಂಥಾಲಯ, ನಮ್ಮ ಆಯ್ಕೆ........






ಕರ್ನಾಟಕ ಸರ್ಕಾರದ ಅಬಕಾರಿ ಇಲಾಖೆ ಆದಾಯ ಹೆಚ್ಚಿಸಿಕೊಳ್ಳುವ ವಿವಿಧ ಯೋಜನೆಗಳನ್ನು ರೂಪಿಸಿ ಅನೇಕ ಪರಿಣಾಮಕಾರಿ ವಿಧಾನಗಳನ್ನು ಅನುಸರಿಸಿ ಜಾರಿಗೆ ತರುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ಪ್ರಾಮುಖ್ಯತೆ ಪಡೆದಿದೆ.....

ಉಚಿತ ಯೋಜನೆಗಳ ಜಾರಿಯ ಪರಿಣಾಮ ಆರ್ಥಿಕ ಪರಿಸ್ಥಿತಿಯ ಸುಧಾರಣೆಗೆ ಇದು ಅವಶ್ಯ ಎಂಬ ಅಭಿಪ್ರಾಯ ವ್ಯಕ್ತಪಡಿಸಲಾಗುತ್ತಿದೆ. ಇದು ಖಂಡಿತ ಸಹನೀಯವಲ್ಲ ಮತ್ತು ಆಕ್ಷೇಪಾರ್ಹ ನಡೆ......

ರಾಜ್ಯದಲ್ಲಿ ಇರುವ ಸಾರ್ವಜನಿಕ ಗ್ರಂಥಾಲಯಗಳ ಸಂಖ್ಯೆ ಸುಮಾರು 1000.

ರಾಜ್ಯದಲ್ಲಿ ಇರುವ ಮದ್ಯಪಾನ ಅಂಗಡಿಗಳ ಅಧಿಕೃತ ಸಂಖ್ಯೆ ಸುಮಾರು 12500. ಅನಧಿಕೃತವಾಗಿ ಇನ್ನೆಷ್ಟೋ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಚಿಂತನೆಗಳ ಸಂಪೂರ್ಣ ವಿರೋಧಿ ನಡೆ.....

ಮದ್ಯಪಾನದ ಆದಾಯದ ಮೇಲೆಯೇ ಸರ್ಕಾರ ನಡೆಯುತ್ತದೆ ಎಂದಾದರೆ ಅದು ನಡೆಯುವುದು ಬೇಡ ಮಲಗಿಬಿಡಲಿ. ಬೇರೆ ಪರ್ಯಾಯ ಮಾರ್ಗ ಖಂಡಿತ ಇದೆ......

ಹತ್ತು ವರ್ಷಗಳಷ್ಟು ದೀರ್ಘ ಅವಧಿಯ ಒಂದು ಕ್ರಿಯಾ ಯೋಜನೆ ಸಿದ್ದಪಡಿಸಿ ನಿಧಾನವಾಗಿ ಪ್ರತಿವರ್ಷ ಶೇಕಡಾ 10% ಮದ್ಯಪಾನದ ನಿಯಂತ್ರಣ ಮಾಡುತ್ತಾ ಬಂದರೆ ಹತ್ತು ವರ್ಷದಲ್ಲಿ ಅದನ್ನು ಸಂಪೂರ್ಣ ನಿಷೇಧ ಮಾಡಬಹುದು ಮತ್ತು ಅದರಿಂದ ದಿಢೀರ್ ಆಗಬಹುದಾದ ಆರ್ಥಿಕ ಮತ್ತು ಸಾಮಾಜಿಕ ದುಷ್ಪರಿಣಾಮಗಳನ್ನು ಮೆಟ್ಟಿ ನಿಲ್ಲಬಹುದು .....

ಸಂಪೂರ್ಣ ಪಾನ ನಿಷೇಧ ಅಥವಾ ಪರ್ಯಾಯ ಮಾರ್ಗಗಳು...........

ನಮ್ಮ ರಾಜ್ಯದಲ್ಲಿ ಮದ್ಯಪಾನ ಮಾಡುವವರ ಸಂಖ್ಯೆ ಸುಮಾರು ಎಷ್ಟಿರಬಹುದು ?

ಎಷ್ಟು ಲೀಟರ್ ಮದ್ಯ ಪ್ರತಿ ನಿತ್ಯ ಅಥವಾ ಪ್ರತಿ ವರ್ಷ ಮಾರಾಟವಾಗುತ್ತದೆ ಎಂಬ ಬಗ್ಗೆ ಸರ್ಕಾರದ ಬಳಿ ಒಂದು ಲೆಕ್ಕ ಇರುತ್ತದೆ. ಆದರೆ ನಿರ್ದಿಷ್ಟವಾಗಿ ಕುಡುಕರ ಸಂಖ್ಯೆ ಸಿಗುವುದಿಲ್ಲ. ಯಾರಿಗೂ ತಿಳಿಯದಂತೆ ಕುಡಿಯುವವರು ಮತ್ತು ಕುಡಿದರೂ ಅದನ್ನು ಬಹಿರಂಗವಾಗಿ ಒಪ್ಪಿಕೊಳ್ಳದವರು ಸಾಕಷ್ಟು ಮಂದಿ ಇದ್ದಾರೆ.

ಒಟ್ಟು ಜನಸಂಖ್ಯೆ ಸುಮಾರು 7 ಕೋಟಿ ಎಂದು ಭಾವಿಸಿ ಅದರಲ್ಲಿ ಕನಿಷ್ಠ ಶೇಕಡಾ 30% ಕುಡಿಯುತ್ತಾರೆ ಎಂದು ಭಾವಿಸಿದರೂ ಸುಮಾರು 2.1 ಕೋಟಿ ಜನ ಆಗುತ್ತಾರೆ. ಇದನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ.

ನೇರವಾಗಿ ಮದ್ಯಪಾನವನ್ನು ಇಡೀ ದೇಶಾದ್ಯಂತ ನಿಷೇಧಿಸಬೇಕು ಎಂಬ ಒಂದು ಹೋರಾಟ ನಡೆಯುತ್ತಿದೆ. ಮದ್ಯದಿಂದ ಸರ್ಕಾರಕ್ಕೆ ಬರುವ ಆದಾಯಕ್ಕಿಂತ ಅದರಿಂದ ಆಗುವ ತೊಂದರೆಯೇ ಹೆಚ್ಚು. ಅಪರಾಧ, ಅಪಘಾತ, ಅನಾರೋಗ್ಯ, ಕೌಟುಂಬಿಕ ಕಲಹ ಎಲ್ಲವನ್ನೂ ಲೆಕ್ಕ ಹಾಕಿದಾಗ ಪ್ರತ್ಯಕ್ಷ ಮತ್ತು ಪರೋಕ್ಷವಾಗಿ ಆಗುವ ಅನಾಹುತ ಅದರ ಎಲ್ಲಾ ಆದಾಯಗಳಿಗಿಂತಲೂ ನಷ್ಟವೇ ಹೆಚ್ಚು ಎಂದು ಹೇಳಲಾಗುತ್ತದೆ.

ಸ್ವಾತಂತ್ರ್ಯ ಪೂರ್ವದಲ್ಲೇ ಮಹಾತ್ಮ ಗಾಂಧಿಯವರು " ನನಗೆ ಈ ದೇಶದ ಮುಖ್ಯಸ್ಥನಾಗಿ ಕಾರ್ಯ ನಿರ್ವಹಿಸಲು ಅಧಿಕಾರ ಸಿಕ್ಕರೆ ನಾನು ಮಾಡುವ ಮೊದಲ ಕೆಲಸ ಮದ್ಯಪಾನ ನಿಷೇಧ " ಎಂದು ಹೇಳಿದ್ದರು ಎಂದರೆ ಅದರ ದುಷ್ಪರಿಣಾಮಗಳನ್ನು ಊಹಿಸಬಹುದು.

ಇದರ ಇನ್ನೊಂದು ಮುಖವೂ ಇದೆ.

ಕುಡಿತ ಎಂಬುದು ಶತಶತಮಾನಗಳಿಂದ ನಮ್ಮ ಸಂಸ್ಕೃತಿಯ ಭಾಗವಾಗಿದೆ. ಹಿತಮಿತದಲ್ಲಿದ್ದಾಗ ಅದೊಂದು ಆರೋಗ್ಯಕರ ಪೇಯ. ಅನೇಕ ಬಾರಿ ಔಷಧಿಯಂತೆ ಸಹ ಕೆಲಸ ಮಾಡುತ್ತದೆ. ಜೀವನೋತ್ಸಾಹ ಹೆಚ್ಚಿಸುವ ಕೆಲವೇ ಅಂಶಗಳಲ್ಲಿ ಮದ್ಯಪಾನ ಸಹ ಒಂದು. ಆಧುನಿಕ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಯ ದೇಶದಲ್ಲಿ ಇದನ್ನು ಜನರ ಸ್ವತಂತ್ರ ಆಯ್ಕೆಯಾಗಿ ಬಿಡಬೇಕು. ಹೇಗಿದ್ದರೂ ಕಾನೂನಿನ ನೀತಿ ನಿಯಮಗಳು ಕುಡಿತಕ್ಕೂ ಅನ್ವಯಿಸುತ್ತದೆ. ತಪ್ಪು ಮಾಡಿದಾಗ ಶಿಕ್ಷೆ ಎಲ್ಲರಿಗೂ ಒಂದೇ. ಜೊತೆಗೆ ಕೌಟುಂಬಿಕ ಹಿಂಸೆ, ಅಪಘಾತ, ಅನಾರೋಗ್ಯ ಎಲ್ಲವೂ ಕುಡಿಯದ ಜನರಲ್ಲೂ ಇದ್ದೇ ಇರುತ್ತದೆ. ವಿಶ್ವದ ಬಹುತೇಕ ದೇಶಗಳಲ್ಲಿ ಕುಡಿತವನ್ನು ಮಾನ್ಯ ಮಾಡಲಾಗಿದೆ. ಸಿಗರೇಟಿನಂತೆ ಕುಡಿತ ಇನ್ನೊಬ್ಬರಿಗೆ ಹಾನಿ ಮಾಡುವುದಿಲ್ಲ ಜೊತೆಗೆ ಕುಡಿಯದಿರುವ ಸ್ವಾತಂತ್ರ್ಯ ಎಲ್ಲರಿಗೂ ಇದೆ. ಯಾವುದೇ ಬಲವಂತವಿಲ್ಲ. ಕುಡಿತವಿಲ್ಲದ ಬದುಕು ಒಂದು ನಿಸ್ಸಾರ. ಅದರ ಆಕರ್ಷಣೆ ಇಲ್ಲದಿದ್ದರೆ ಉದ್ಯೋಗಿಗಳ ಶ್ರಮದ ಗುಣಮಟ್ಟವೇ ಕುಸಿಯುತ್ತದೆ. ಎಷ್ಟೋ ಸಾಹಿತ್ಯ ಸಂಗೀತ ಸಿನಿಮಾ ಲಲಿತಕಲೆಗಳು ಕುಡಿತದ ನೆರಳಲ್ಲಿ ತನ್ನ ಅತ್ಯುತ್ಕೃಷ್ಟ ಸ್ಥಿತಿ ತಲುಪಿವೆ. ಕುಡಿತಕ್ಕಿಂತ ಅಪಾಯಕಾರಿಯಾದ ಇತರೆ ಅಂಶಗಳು ಈಗಲೂ ಈ ಸಮಾಜದಲ್ಲಿ ತನ್ನ ಅಸ್ತಿತ್ವ ಉಳಿಸಿಕೊಂಡಿವೆ ಎಂಬುದು ಇನ್ನೊಂದು ವಾದ.

ಈಗ ಯೋಚಿಸಬೇಕಾದ ಸರದಿ ನಮ್ಮದು.

ಕುಡಿತವನ್ನು ಸಂಪೂರ್ಣ ನಿಷೇಧಿಸುವುದು ಒಟ್ಟು ವ್ಯವಸ್ಥೆಯ ದೃಷ್ಟಿಯಿಂದ ಕಷ್ಟವಾಗಬಹುದು. ಸರ್ವಾಧಿಕಾರ ಎನಿಸಬಹುದು. ಅದರ ದುಷ್ಪರಿಣಾಮಗಳನ್ನು ತಡೆಯಲು ಪ್ರಯತ್ನಿಸುವುದು ಉತ್ತಮ ಮಾರ್ಗವಾಗಬಹುದೆ ?

ಕುಡಿತದಲ್ಲಿರುವ ಅಪಾಯಕಾರಿ ಆಲ್ಕೊಹಾಲ್ ಪ್ರಮಾಣವನ್ನು 30/40/50% ನಿಂದ 14% ಒಳಗಡೆ ನಿಯಂತ್ರಿಸುವುದು.

ಆಗ ಅದು ಹೆಚ್ಚು ದುಷ್ಪರಿಣಾಮ ಬೀರುವುದಿಲ್ಲ.

ಕುಡಿತಕ್ಕೆ ಪರ್ಯಾಯವಾಗಿ ಅಷ್ಟೇ ಪರಿಣಾಮಕಾರಿ ಮತ್ತು ಆರೋಗ್ಯಯುತ ಮದ್ಯಪಾನ ಸಂಶೋಧಿಸುವುದು. ( ಮೈಸೂರಿನ ಆಹಾರ ಸಂಶೋಧನಾ ಸಂಸ್ಥೆಗೆ ಇದರ ಜವಾಬ್ದಾರಿ ವಹಿಸುವುದು ).

ಎಲ್ಲಾ ಖಾಸಗಿ ಮದ್ಯಪಾನ ಉತ್ಪಾದನಾ ಘಟಕಗಳನ್ನು ನಿಷೇಧಿಸಿ ಸರ್ಕಾರದ ನಿಯಂತ್ರಣದಲ್ಲಿ ತಂದು ಪಡಿತರ ವ್ಯವಸ್ಥೆ ಮುಖಾಂತರ ಹಿತಮಿತವಾಗಿ ಹಂಚುವುದು.

ಬಾರ್ ವೈನ್ ಶಾಪ್ ಗಳ ಬೇಕಾಬಿಟ್ಟಿ ಅನುಮತಿ ನೀಡುವುದು ನಿಲ್ಲಿಸಿ ತುಂಬಾ ಕಡಿಮೆ ಪ್ರಮಾಣದಲ್ಲಿ ನೀಡುವುದು. ಅದನ್ನು ಹುಡುಕಿ ಹೋಗುವುದೇ ಒಂದು ಶ್ರಮದಾಯಕ ಕೆಲಸವಾಗಿ ನಿರಾಸಕ್ತಿ ಮೂಡುವಂತಿರಬೇಕು.

ಮಿಲಿಟರಿ ಹೊರತುಪಡಿಸಿ ಎಲ್ಲಾ ಸರ್ಕಾರಿ ಅಧಿಕಾರಿಗಳು ಮತ್ತು ಮಾಧ್ಯಮಗಳವರಿಗೆ ಇದನ್ನು ಸಂಪೂರ್ಣ ಎಲ್ಲಾ ಸಮಯದಲ್ಲೂ ನಿಷೇಧಿಸಬೇಕು.

ಹೇಗಿದ್ದರೂ ಜಿಎಸ್ಟಿ ಜಾರಿಯಾಗಿರುವುದರಿಂದ ಇದನ್ನು ರಾಷ್ಟ್ರೀಕರಣ ಮಾಡಿ ಕೇಂದ್ರ ನಿಯಂತ್ರಣಕ್ಕೆ ಒಳಪಡಿಸಿ ಆದಾಯ ಹಂಚಿಕೆಯಾಗಬೇಕು.

ಎಂದಿನಂತೆ ಇದರ ಬೆಲೆ ಹೆಚ್ಚಾಗಬೇಕು ಮತ್ತು ಬಿಪಿಎಲ್ ಕಾರ್ಡು ದಾರರಿಗೆ ಮಾತ್ರ ಸಬ್ಸಿಡಿ ಬೆಲೆಯಲ್ಲಿ ಕೊಡಬೇಕು.

ಇದು ಸೂಕ್ತವಲ್ಲದಿದ್ದರೂ ನಮ್ಮ ಸಮಾಜದ ಸದ್ಯದ ಪರಿಸ್ಥಿತಿಯಲ್ಲಿ ಇದು ಅವಶ್ಯಕ.


ಸಿನಿಮಾ ನಟರು ಧಾರ್ಮಿಕ ಮುಖಂಡರ ಮುಖಾಂತರ ನಿರಂತರವಾಗಿ ಕುಡಿತದ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಬೇಕು.

ಈಗ ಇರುವ ನಿಯಮಗಳನ್ನು ಮತ್ತಷ್ಟು ವಿಸ್ತರಿಸಿ ಯಾವುದೇ ಸಾರ್ವಜನಿಕ ಖಾಸಗಿ ಸಮಾರಂಭಗಳು, ಸರ್ಕಾರಿ ಕಚೇರಿಗಳು, ಸಿನಿಮಾ ನಾಟಕ ಮಂದಿರಗಳು, ಸಾರಿಗೆ ವಾಹನಗಳು ಮುಂತಾದ ಎಲ್ಲಾ ಕಡೆ ಕುಡಿದವರ ಪ್ರವೇಶ ನಿಷೇಧಿಸಬೇಕು. ಅದಕ್ಕಾಗಿ ಅಲ್ಕೋಹಾಲ್ ಪತ್ತೆ ಹಚ್ಚುವ ಯಂತ್ರ ಸ್ಥಾಪಿಸಬೇಕು.

ಇಡೀ ಸಮಾಜದಲ್ಲಿ ಹಿಂದಿನ ಕಾಲದಲ್ಲಿ ಇದ್ದಂತೆ ಕುಡಿತ ಎಂಬುದು ಅತ್ಯಂತ ಕೆಟ್ಟ ಅಭ್ಯಾಸಗಳಲ್ಲಿ ಒಂದು ಎಂದು ಮತ್ತೆ ಭಾವಿಸುವ ಸಾಮೂಹಿಕ ವಾತಾವರಣ ನಿರ್ಮಾಣವಾಗಬೇಕು. ಕುಡಿತ ಇಲ್ಲದ ಹುಡುಗ ಹುಡುಗಿಯರ ಮದುವೆ ಪ್ರಸ್ತಾಪ ಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು.

ಹೀಗೆ ಇನ್ನೂ ಹಲವಾರು ಕ್ರಮಗಳ ಮೂಲಕ ಸಂಪೂರ್ಣ ಪಾನ ನಿಷೇಧ ಇಲ್ಲದಿದ್ದರೂ ತನ್ನಿಂದ ತಾನೇ ಕುಡಿತ ಜನರಿಂದ ದೂರ ಸರಿಯುವಂತೆ ಮಾಡಬೇಕು. ಸರ್ಕಾರದ ಆದಾಯಕ್ಕೆ ನಿಧಾನವಾಗಿ ಪರ್ಯಾಯ ಮೂಲಗಳನ್ನು ಹುಡುಕಬೇಕು. ಬಡವರು ಮತ್ತು ಶ್ರಮಿಕರು ಕುಡಿತದಿಂದ ತೊಂದರೆ ಅನುಭವಿಸುವುದು ಹೆಚ್ಚು. ಇಡೀ ಆಡಳಿತ ಯಂತ್ರ ಮತ್ತು ಮಂದಿರ ಮಸೀದಿ ಚರ್ಚುಗಳು ಈ ನಿಟ್ಟಿನಲ್ಲಿ ಹೆಚ್ಚು ಶ್ರಮವಹಿಸಿ ಕೆಲಸ ಮಾಡಬೇಕು. ಶ್ರಮಿಕರ ಜೀವನಮಟ್ಟ ಸುಧಾರಣೆಯೂ ಇದರಲ್ಲಿ ಸೇರಿರಬೇಕು. ಆಗ ಅವರ ಕುಡಿತದ ಚಟ ಗಣನೀಯವಾಗಿ ಕಡಿಮೆಯಾಗುತ್ತದೆ..........

ಇದು ಕುಡುಕನಲ್ಲದ ಒಬ್ಬ ವ್ಯಕ್ತಿಯ ಒಂದು ಸಣ್ಣ ಸಲಹೆ. ಇದಕ್ಕಿಂತ ಉತ್ತಮ ಸಲಹೆಗಳನ್ನು ಸಹ ಸ್ವಾಗತಿಸುತ್ತಾ...............



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068



ಚಿತ್ರದುರ್ಗ ನಗರದ ನಮ್ಮ ಎಕ್ಸಲೆಂಟ್ ಪಿಯು ಕಾಲೇಜಿನಲ್ಲಿ ಬೋಧಕ ವೃಂದದವರು , ವಿದ್ಯಾರ್ಥಿಗಳು ಶನಿವಾರ ಗಣೇಶ ಪ್ರತಿಷ್ಠಾಪಿಸಿ ಭಕ್ತಿಯಿಂದ ಪೂಜಿಸಿದರು




ಚಿತ್ರದುರ್ಗ ನಗರದ ಜಿಲ್ಲಾ ಮದಕರಿ ನಾಯಕ ವಿದ್ಯಾಸಂಸ್ಥೆಯ ಆವರಣದಲ್ಲಿನ ಮದರ್ ತೆರೇಸಾ ಸ್ಕೂಲ್ ಆಫ್ ನರ್ಸಿಂಗ್ ನಲ್ಲಿ ಗುರುವಾರ ಶಿಕ್ಷಕರ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರಿನ್ಸಿಪಾಲ್ ಮಂಜುಳಾ, ಉಪನ್ಯಾಸಕರು, ಹುಣಸೆಕಟ್ಟೆ ಮಹಾಂತೇಶ್, ಹಾಗೂ ವಿದ್ಯಾರ್ಥಿಗಳು ಇದ್ದರು

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T